## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1158 |
| ಸದಸ್ಯರ ಹೆಸರು | : | ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತ ರಾದವರು) |
| ಉತ್ತರಿಸಬೇಕಾದ ದಿನಾಂಕ | : | 16.12.2025 |
| ಉತ್ತರಿಸುವ ಸಚಿವರು | : | ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರೈತರು ಕೃಷಿ ಮಾರುಕಟ್ಟೆಗೆ ತಂದ ಬೆಳೆಗಳನ್ನು ಮೌಲ್ಯವರ್ಧನೆ ಮಾಡಲು ಎಷ್ಟು ಮಾರುಕಟ್ಟೆಗಳನ್ನು ತೆಗೆಯಲಾಗಿದೆ; | ರೈತರು ಬೆಳೆದ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಸೌಲಭ್ಯ ಒದಗಿಸುವ ದೃಷ್ಠಿಯಿಂದ ರಾಜ್ಯ ಸರ್ಕಾರವು ರಾಜ್ಯದಲ್ಲಿ 171 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳನ್ನು ಸ್ಥಾಪಿಸಲಾಗಿದೆ.<br>ಅವುಗಳಡಿ, ಮುಖ್ಯ ಮಾರುಕಟ್ಟೆ ಪ್ರಾಂಗಣಗಳು – 171 ಹಾಗೂ ಉಪ ಮಾರುಕಟ್ಟೆ ಪ್ರಾಂಗಣಗಳು – 411 ಕಾರ್ಯನಿರ್ವಹಿಸುತ್ತಿವೆ. |
| ಆ) | ರೈತರ ಬೆಳೆಗಳನ್ನು ಮಾರುಕಟ್ಟೆಗಳಲ್ಲಿ ಯಾವ ರೀತಿ ಮೌಲ್ಯವರ್ಧನ ಮಾಡಲಾಗುತ್ತದೆ; | ಕೃಷಿ ಉತ್ಪನ್ನ ಮಾರುಕಟ್ಟೆಗೆ ರೈತರು ಮಾರಾಟಕ್ಕಾಗಿ ತರುವ ಉತ್ಪನ್ನಗಳಿಗೆ ಹೆಚ್ಚಿನ ಧಾರಣೆ ದೊರಕಿಸಿಕೊಡುವ ನಿಟ್ಟಿನಲ್ಲಿ ಈ ಕೆಳಕಂಡ ಮೌಲ್ಯವರ್ಧನೆ ಸೌಲಭ್ಯಗಳನ್ನು ಕಲ್ಪಿಸಲಾಗಿದೆ:-<br>• 61 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಕ್ಲಿನಿಂಗ್, ಗ್ರೇಡಿಂಗ್ ಹಾಗೂ ಪ್ಯಾಕಿಂಗ್ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.<br>• ಉತ್ಪನ್ನಗಳನ್ನು ಮಾರಾಟ ಮಾಡಲು ಮುಚ್ಚು ಹರಾಜುಕಟ್ಟೆಗಳನ್ನು ಕಲ್ಪಿಸಲಾಗಿದೆ.<br>• ಒಟ್ಟು 75 ಸಮಿತಿಗಳಲ್ಲಿ ಅಸ್ಸೆಯಿಂಗ್ ಲ್ಯಾಬ್ ಹಾಗೂ ಗುಣವಿಶ್ಲೇಷಣಾ ಘಟಕಗಳನ್ನು ಸ್ಥಾಪಿಸಲಾಗಿದೆ.<br>• ಆರ್.ಐ.ಡಿ.ಎಫ್ ಯೋಜನೆಯಡಿ 225 ಹಾಗೂ ಆರ್.ಕೆ.ವಿ.ವೈ ಯೋಜನೆಯಡಿ 268 ವಿವಿಧ ಸಾಮರ್ಥ್ಯದ ಗೋದಾಮುಗಳನ್ನು ನಿರ್ಮಿಸ ಲಾಗಿದೆ.<br>• ಒಟ್ಟು 22 ಶಿಥಲೀಕರಣ ಘಟಕಗಳನ್ನು ಸ್ಥಾಪಿಸಲು ಕ್ರಮವಹಿಸಲಾಗಿದೆ.<br>• 04 ಸೈಲೋಸ್ ಗಳನ್ನು ಸ್ಥಾಪಿಸಲಾಗಿದೆ.<br>• ತೂಕದಲ್ಲಾಗುವ ಮೋಸವನ್ನು ತಡೆಗಟ್ಟಲು ಆಯ್ದ 11 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ವ್ಯಾಪ್ತಿಯಲ್ಲಿ ಡಿಜಿಟಲ್ ತೂಕದ ಯಂತ್ರಗಳ ಸ್ಥಾಪನೆಗೆ ಕ್ರಮ ವಹಿಸಿದೆ. |
| ಇ) | ಮೌಲ್ಯವರ್ಧನ ಮಾಡಿದ ಬೆಳೆಗಳನ್ನು ಸರ್ಕಾರ ಸಂರಕ್ಷಣೆ ಮಾಡಲು ಯಾವ ಕ್ರಮ ಕೈಗೊಂಡಿದೆ? | ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಪ್ರಾಂಗಣಗಳಲ್ಲಿ ರೈತರ ಉತ್ಪನ್ನಗಳನ್ನು ಖರೀದಿದಾರರು ಖರೀದಿಸಿ ಅಂದೇ ಕೊಂಡ್ಯೊಯುತ್ತಾರೆ.<br>ಕೆಲವು ಸಂದರ್ಭಗಳಲ್ಲಿ ಮಾರುಕಟ್ಟೆ ಪ್ರಾಂಗಣ ಗಳಲ್ಲಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಉಗ್ರಾಣಗಳಲ್ಲಿ ಹಾಗೂ ಮಾರುಕಟ್ಟೆ ಪ್ರಾಂಗಣಗಳ ಹೊರಗಡೆ ಇರುವ ಖಾಸಗಿ ಉಗ್ರಾಣಗಳಲ್ಲಿ ಉತ್ಪನ್ನ ಗಳನ್ನು ದಾಸ್ತಾನು ಮಾಡಲು ವ್ಯವಸ್ಥೆ ಕಲ್ಪಿಸಲಾಗಿದೆ. ಮಾರುಕಟ್ಟೆ ಪ್ರದೇಶದಲ್ಲಿ ಸರ್ಕಾರಿ/ಖಾಸಗಿಯವರು ಸ್ಥಾಪಿಸಿರುವ ಕೋಲ್ಡ್ ಸ್ಟೋರೇಜ್ ಘಟಕಗಳಲ್ಲಿ ಹಾಗೂ ಶಿಥಲೀಕರಣ ಘಟಕಗಳಲ್ಲಿ ರೈತರು ಉತ್ಪನ್ನಗಳನ್ನು ದಾಸ್ತಾನು ಮಾಡಲು ವ್ಯವಸ್ಥೆ ಕಲ್ಪಿಸಲಾಗಿದೆ. |

CO 315 MRE 2025

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರ
ಹಾಗೂ ಕೃಷಿ ಮಾರುಕಟ್ಟೆ ಸಚಿವರು